VIJAYA KARNATAKA



### ವಿಟ್ಲ ಸಿಪಿಸಿಆರ್ಐಯಲ್ಲಿ ಕೃಷಿ ಮೇಳ-2015 ಉದ್ಘಾಟನೆ

# ಕಸ್ತೂರಿರಂಗನ್ ವರದಿ ಬಗ್ಗೆ ಆತಂಕ ಬೇಡ: ಡಿವಿಎಸ್

■ ವಿಕ ಸುದ್ದಿಲೋಕ ವಿಟ್ಲ

ಕಸ್ತೂರಿರಂಗನ್ ವರದಿ ವಿಚಾರದಲ್ಲಿ ಯಾರೊಬ್ಬರೂ ಆತಂಕ ಪಡುವ ಅವಶ್ಯಕತೆ ಇಲ್ಲ, ಸ್ಯಾಟಲೈಟ್ ಆಧರಿತ ವರದಿಯನ್ನು ಕಸ್ತೂರಿರಂಗನ್ ನೀಡಿದ್ದು, ಇದರಲ್ಲಿ ಸೂಕ್ಷ್ಮ ಅಧ್ಯಯನ ನಡೆದಿಲ್ಲ, ಗ್ರಾಮಗಳಿಂದ ರೈತರು, ತಜ್ಞರನ್ನು ಕರೆಸಿಕೊಂಡು ಚರ್ಚಿಸಿ ಕೇಂದ್ರ ಸರಕಾರಕ್ಕೆ ರಾಜ್ಯ ಶೀಘ್ರ ವರದಿ ನೀಡುವ ಕಾರ್ಯವಾಗಬೇಕು ಎಂದು ಕೇಂದ್ರ ಕಾನೂನು ಸಚಿವ ಡಿ.ವಿ. ಸದಾನಂದ ಗೌಡ ಹೇಳಿದರು.

ವಿಟ್ಲ ಕೇಂದ್ರೀಯ ತೋಟದ ಬೆಳೆಗಳ ಪ್ರಾದೇಶಿಕ ಸಂಶೋಧನಾ ಸಂಸ್ಥೆಯಲ್ಲಿ ಶನಿವಾರ ನಡೆದ ಕೃಷಿ ಮೇಳ-2015 ಉದ್ಘಾಟಿಸಿ ಮಾತನಾಡಿದರು.

ಅಡಕೆ ನಿಷೇಧ ಆಗುವುದಕ್ಕೆ ಕೇಂದ್ರ ಸರಕಾರ ಯಾವುದೇ ಆಸ್ಪದ ನೀಡುವುದಿಲ್ಲ, ಅಡಕೆ ಆರೋಗ್ಯಕ್ಕೆ ಪೂರಕ ಎಂಬ ವಿಚಾರದಲ್ಲಿ ಚೆನ್ನೈ ಮೆಡಿಕಲ್ ಸೆಂಟರ್ ವರದಿ ನೀಡಿದ್ದು, ಈಗಾಗಲೇ ಕೇಂದ್ರ ಆರೋಗ್ಯ, ಕೃಷಿ ಸಚಿವರೊಂದಿಗೆ ಚರ್ಚಿಸಿದ್ದು, ನ್ಯಾಯಾಲದಲ್ಲಿರುವ ಅಡಕೆ ನಿಷೇಧ ಪ್ರಕರಣಕ್ಕೆ ಸರಿಯಾದ ಉತ್ತರ ನೀಡಲು ಕಾನೂನು ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಕೆಲಸ ಕಾರ್ಯಗಳು ಆಗಿದೆ. ಕಾನೂನು ವ್ಯವಸ್ಥೆಯಲ್ಲಿ ಇದಕ್ಕೆ ಆಗಬೇಕಾಗಿರುವ ಎಲ್ಲ ಕಾರ್ಯಗಳನ್ನು ಕಾನೂನು ಸಚಿವನ ನೆಲೆಯಲ್ಲಿ ತಾನೇ ನಿರ್ವಹಿಸುವುದಾಗಿ ತಿಳಿಸಿದರು.

ಅಧ್ಯಕ್ಷತೆ ವಹಿಸಿದ ಪುತ್ತೂರು ಶಾಸಕಿ ಶಕುಂತಳಾ ಶೆಟ್ಟಿ ಮಾತನಾಡಿ, ರಬ್ಬರ್ ಬೆಳೆಗಾರರು ಆತಂಕಕ್ಕೀಡಾಗಿದ್ದು, ಆಮದು ರಬ್ಬರಿಗೆ ಶೇ. 70 ತೆರಿಗೆ ವಿಧಿಸುವ ಮೂಲಕ ರಬ್ಬರ್ ಬೆಳೆಗಾರರ ಹಿತಾಸಕ್ತಿ ಕಾಪಾಡಬೇಕಾಗಿದೆ. ಅಡಕೆ ಧಾರಣೆ 300 ರೂ.ಗಿಂತ ಕಡಿಮೆಯಾಗದಂತೆ ನೋಡಿಕೊಳ್ಳಬೇಕೆಂದು ಸಚಿವರು ಹಾಗೂ ಕ್ಯಾಂಪ್ಕೋ ಅಧ್ಯಕ್ಷರಲ್ಲಿ ಮನವಿ ಮಾಡಿದರು.

ಕ್ಯಾಂಪ್ಕೋ ಅಧ್ಯಕ್ಷ ಕೊಂಕೋಡಿ ಪದ್ಮನಾಭ, ಜಿಪಂ ಅಧ್ಯಕ್ಷೆ ಆಶಾ ತಿಮ್ಮಪ್ಪ, ಸದಸ್ಯೆ ಶೈಲಜಾ ಕೆ.ಟಿ. ಭಟ್, ವಿಟ್ಲ ಗ್ರಾಪಂ ಅಧ್ಯಕ್ಷೆ ಭವಾನಿ ರೈ ಕೊಲ್ಯ, ಶಿವಮೊಗ್ಗ ಮ್ಯಾಮ್ಕೋಸ್ ಉಪಾಧ್ಯಕ್ಷ ನರಸಿಂಹ ನಾಯಕ್, ಕೊಚ್ಚಿ ಗೇರು ಮತ್ತು ಕೊಕ್ಕೋ ಅಭಿವೃದ್ಧಿ ನಿರ್ದೇಶನಾಲಯದ ನಿರ್ದೇಶಕ ಡಾ. ವೆಂಕಟೇಶ್ ಎನ್. ಹುಬ್ಬಳ್ಳಿ, ಶ್ರೀಪಡ್ರೆ, ಅಖಿಲ ಭಾರತ ಅಡಕೆ ಬೆಳೆಗಾರರ ಒಕ್ಕೂಟ ಅಧ್ಯಕ್ಷ ಮಂಚಿ ಶ್ರೀನಿವಾಸ ಆಚಾರ್, ಕೇರಳ ಅಡಕೆ ಮತ್ತು ಸಂಬಾರ ಬೆಳೆಗಳ ಉಪ ನಿರ್ದೇಶಕ ಬಾಬೂಲಾಲ್ ಮೀನ ಉಪಸ್ಥಿತರಿದ್ದರು.

ಕಾಸರಗೋಡು ಸಿಪಿಸಿಆರ್ಐ ನಿರ್ದೇಶಕ ಡಾ. ಪಿ. ಚೌಡಪ್ಪ ಸ್ವಾಗತಿಸಿದರು. ವಿಟ್ಲ ಸಿಪಿಸಿಆರ್ಐ ಮುಖ್ಯಸ್ಥ ಡಾ. ಕೆ.ಎಸ್. ಆನಂದ ವಂದಿಸಿದರು. ವಿಟ್ಲ ಸಿಪಿಸಿಆರ್ಐ ವಿಜ್ಞಾನಿ ಡಾ. ನಾಗರಾಜ್ ನಿರೂಪಿಸಿದರು. ಕಾಸರಗೋಡು, ದ.ಕ., ಉಡುಪಿ, ಶಿವಮೊಗ್ಗ ಜಿಲ್ಲೆಯ ಕೃಷಿಕರು ಪಾಲ್ಗೊಂಡರು.



ವಿಟ್ಲ ಕೇಂದ್ರೀಯ ತೋಟದ ಬೆಳೆಗಳ ಪ್ರಾದೇಶಿಕ ಸಂಶೋಧನಾ ಸಂಸ್ಥೆಯಲ್ಲಿ ಶನಿವಾರ ನಡೆದ ಕೃಷಿ ಮೇಳ-2015ನ್ನು ಕೇಂದ್ರ ಕಾನೂನು ಸಚಿವ ಡಿ.ವಿ. ಸದಾನಂದ ಗೌಡ ಉದ್ಘಾಟಿಸಿದರು.

## ಉಗ್ರರ ದಮನಕ್ಕೆ ಕೇಂದ್ರ ದಿಟ್ಟ ಹೆಜ್ಜೆ: ಡಿವಿಎಸ್

ವಿಟ್ಲ: ಉಗ್ರರ ನಿಗ್ರಹಕ್ಕೆ ಕೇಂದ್ರ ಸರಕಾರ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲು ರಾಜ್ಯ ಸರಕಾರಗಳಿಗೆ ಗೃಹ ಸಚಿವರ ಮೂಲಕ ಸ್ಪಷ್ಟ ನಿರ್ದೇಶನ ನೀಡಲಾಗಿದೆ ಎಂದು ಕೇಂದ್ರ ಕಾನೂನು ಸಚಿವ ಡಿ.ವಿ. ಸದಾನಂದ ಗೌಡ ಹೇಳಿದ್ದಾರೆ. ವಿಟ್ಲ ಸಿಪಿಸಿಆರ್ಐ ವತಿಯಿಂದ ಆಯೋಜಿಸಲಾಗಿದ್ದ ಕೃಷಿ ಮೇಳಕ್ಕೆ ಆಗಮಿಸಿದ್ದ ಅವರು ಪತ್ರಕರ್ತರೊಂದಿಗೆ ಮಾತನಾಡಿದರು.

ಉಗ್ರವಾದದ ವಿರುದ್ಧ ಹೋರಾಟ ಗಂಭೀರ ವಿಚಾರವಾಗಿದ್ದು, ಇದನ್ನು ರಾಜಕೀಯಕ್ಕೆ ಬಳಸುವುದು ಸರಿಯಲ್ಲ ಎಂದ ಅವರು, ಉಗ್ರರ ವಿರುದ್ಧ ಕೇಂದ್ರ ಹಾಗೂ ರಾಜ್ಯ ಸರಕಾರ ಜಂಟಿ ಕಾರ್ಯಾಚರಣೆಯ ಅಗತ್ಯವಿದೆ ಎಂದರು.

ಕಾನೂನು ಸುವ್ಯವಸ್ಥೆ ರಾಜ್ಯದ ಜವಾಬ್ದಾರಿ. ಅದಕ್ಕೆ ಪೂರಕವಾದ ನೆರವನ್ನು ಕೇಂದ್ರ ನೀಡುತ್ತದೆ ಎಂದ ಅವರು, ಭಟ್ಕಳ ಭಯೋತ್ಪಾದಕರ ಕೇಂದ್ರವಾಗುತ್ತಿರುವ ಬಗ್ಗೆ, ಕರ್ನಾಟಕ ಸರಕಾರಕ್ಕೆ ಈಗಾಗಲೇ ಮುನ್ಸೂಚನೆ ನೀಡಿದ್ದು, ಈ ಬಗ್ಗೆ ನಿಗಾ ವಹಿಸುವಂತೆ ಸೂಚಿಸಲಾಗಿದೆ ಎಂದರು.

ಪುತ್ತೂರಿನ ವಿವೇಕಾನಂದ ಕಾಲೇಜು ಬಳಿಯ ಪಡ್ನೂರು ರಸ್ತೆಯ ಬದಿ ಉಗ್ರ ಬರಹಗಳ ಬಗ್ಗೆ ಪ್ರತಿಕ್ರಿಯಿಸಿದ ಅವರು, ಇದು ಕಿಡಿಗೇಡಿಗಳ ಕೃತ್ಯ ಎಂಬುದು ಮೇಲ್ನೋಟಕ್ಕೆ ಸಾಬೀತಾಗಿದ್ದು, ಇದನ್ನು ಯಾವುದೇ ಕಾರಣಕ್ಕೆ ಕಡೆಗಣಿಸದೇ ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರಿಗೆ ಸೂಚಿಸಲಾಗುವುದು ಎಂದರು.

ಸಂಜಯ್ ದತ್‌ಗೆ ವಿಶೇಷ ಪೆರೋಲ್ ನೀಡಿರುವ ಕ್ರಮದ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಪ್ರಭಾವಿಗಳು, ಪ್ರತಿಷ್ಠಿತ ವ್ಯಕ್ತಿಗಳು ಎಂಬ ಕಾರಣದಿಂದ ನಡೆಯುವ ಇಂತಹ ಕಾನೂನು ಸಡಿಲಿಕೆಯ ವಿದ್ಯಮಾನಗಳಿಂದ ನಾಗರಿಕ ಸಮುದಾಯಕ್ಕೆ ಸರಕಾರ ಹಾಗೂ ಕಾನೂನು ವ್ಯವಸ್ಥೆಯ ಬಗ್ಗೆ ಇರುವ ನಂಬಿಕೆ ಕಡಿಮೆಯಾಗುತ್ತದೆ. ಇದು ಗಂಭೀರ ವಿಚಾರವಾಗಿದ್ದು, ಈ ಬಗ್ಗೆ ಸಂಬಂಧಪಟ್ಟ ರಾಜ್ಯ ಸರಕಾರದ ಜತೆ ಮಾತುಕತೆ ನಡೆಸುವುದಾಗಿ ತಿಳಿಸಿದರು.